# ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು : ಶ್ರೀಮತಿ ಹೇಮಲತಾ ನಾಯಕ್
(ವಿಧಾನ ಸಭೆಯಿಂದ ಚುನಾಯಿತರಾದವರು)
ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 538
ಉತ್ತರ ದಿನಾಂಕ : 08.12.2023

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೊಪ್ಪಳ ಜಿಲ್ಲೆಯಲ್ಲಿ ಇತ್ತೀಚಿನ ದಿನಗಳಲ್ಲಿ ಕಲುಷಿತ ಕುಡಿಯುವ ನೀರಿನಿಂದಾಗಿ ನಾಗರೀಕರು ಮರಣ ಹೊಂದಿರುವುದು ಮತ್ತು ಅನೇಕ ಆರೋಗ್ಯ ಸಮಸ್ಯೆಗಳನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಮುನ್ನೆಚ್ಚರಿಕೆ ಕ್ರಮಗಳೇನು: (ಮಾಹಿತಿ ನೀಡುವುದು) | ಬಂದಿದೆ.<br>ಶುದ್ಧ ಕುಡಿಯುವ ನೀರನ್ನು ಸರಬರಾಜು ಮಾಡಲು ತೆಗೆದುಕೊಂಡಿರುವ ಮುನ್ನೆಚ್ಚರಿಕೆ ಕ್ರಮಗಳು.<br>• ಕಲುಷಿತ ನೀರು ಕಂಡು ಬಂದಂತಹ ನೀರಿನ ಮೂಲಗಳನ್ನು ತಾತ್ಕಾಲಿವಾಗಿ ಮುಚ್ಚಿಸಿ, ಹೆಚ್ಚಿನ ಗುಣಮಟ್ಟದ ಪರೀಕ್ಷೆಗಾಗಿ ಪ್ರಯೋಗಾಲಯಗಳಿಗೆ ಕಳುಹಿಸಿ, ವರದಿ ಪಡೆಯಲಾಗುವುದು.<br>• ಕಲುಷಿತವಲ್ಲದ ನೀರಿನ ಮೂಲಗಳಿಂದ ನೀರನ್ನು ಗ್ರಾಮದ ಜನತೆಗೆ ಸರಬರಾಜು ಮಾಡಲಾಗುವುದು.<br>• ಶುದ್ಧ ಕುಡಿಯುವ ನೀರಿನ ಘಟಕಗಳಿಂದ ಕುಡಿಯುವ ನೀರನ್ನು ಬಳಸುವಂತೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳ್ನು ಹಮ್ಮಿಕೊಳ್ಳಲಾಗುವುದು.<br>• ಟ್ಯಾಂಕರ್ ಮೂಲಕ ಕುಡಿಯುವ ನೀರನ್ನು ಸರಬರಾಜು ಮಾಡಲು ಕೂಡಲೇ ಕ್ರಮ ಕೈಗೊಳ್ಳಲಾಗುವುದು.<br>• ಸ್ಥಳದಲ್ಲಿಯೇ ನೀರಿನ ಗುಣಮಟ್ಟದ ಪರೀಕ್ಷೆಗಳನ್ನು ಕೈ ಗೊಳ್ಳಲು ಅಗತ್ಯವಿರುವ FTK Kit & $H_2S$ Vials ಗಳನ್ನು ಗ್ರಾಮ ಪಂಚಾಯತಿಗಳಿಗೆ ಒದಗಿಸಲಾಗಿದ್ದು, ಅಗತ್ಯ ತರಬೇತಿಯನ್ನು ನೀಡಲಾಗಿದೆ.<br>• ಆಶಾ ಅಂಗನವಾಡಿ, ಕಾರ್ಯಕರ್ತೆಯರಿಗೆ ಮತ್ತು ಎಲ್ಲಾ ಪಂಚಾಯತಿ ಸಿಬ್ಬಂದಿಗಳಿಗೆ ನೀರಿನ ಗುಣಮಟ್ಟ ಪರೀಕ್ಷೆಗೆ ಸಂಬಂಧಿಸಿದಂತೆ ತರಬೇತಿಯನ್ನು ನೀಡಲಾಗುವುದು. |
| ಆ) | ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಅಂತರ್ಜಲದಲ್ಲಿ ಫ್ಲೋರೈಡ್ ಅಂಶ ಕಂಡು ಬಂದಿದೆಯೇ: | 09 ಜಿಲ್ಲೆಗಳಲ್ಲಿ ಅಂತರ್ಜಲದಲ್ಲಿ ಫ್ಲೋರೈಡ್ ಅಂಶ ಕಂಡು ಬಂದಿದೆ. |

| | | |
|---|---|---|
| ಇ) | ಕೊಪ್ಪಳ ಜಿಲ್ಲೆಯಲ್ಲಿರುವ ಫ್ಯಾಕ್ಟರಿಗಳ ಸುತ್ತಮುತ್ತಲೂ ಹೊಲಗಳಲ್ಲಿ ಅಂತರ್ಜಲದಲ್ಲಿ ಫ್ಲೋರೈಡ್ ಬರಲು ಕಾರಣವೇನು: | ಭೂಮಿಯ ಒಳ ಪದರಗಳಲ್ಲಿರುವ ಶಿಲೆಗಳಲ್ಲಿರುವ (ಗ್ರಾನೈಟ್) ಫ್ಲೋರೈಡ್ ಅಂಶವು ಅಂತರ್ಜಲದೊಂದಿಗೆ ಬೆರೆತು ನೀರಿನಲ್ಲಿ ಫ್ಲೋರೈಡ್ ಅಂಶವು ಕಂಡು ಬರುತ್ತದೆ. |
| ಈ) | ಫ್ಯಾಕ್ಟರಿಗಳ ಸುತ್ತಮುತ್ತಲೂ ವಾಸಿಸುವ ಜನಸಾಮಾನ್ಯರು ಈ ಫ್ಲೋರೈಡ್‌ಯುಕ್ತ ನೀರನ್ನು ಕುಡಿಯುವುದನ್ನು ತಪ್ಪಿಸಲು ಮತ್ತು ಸರ್ಕಾರವು ಶುದ್ಧ ನೀರು ಪೂರೈಸಲು ಕೈಗೊಂಡಿರುವ ಪರಿಹಾರದ ಕ್ರಮಗಳೇನು: (ತಾಲ್ಲೂಕುವಾರು ಮಾಹಿತಿ ನೀಡುವುದು) | ಕೊಪ್ಪಳ ಜಿಲ್ಲೆಯ ಕುಷ್ಠಗಿ ಮತ್ತು ಯಲಬುರ್ಗಾ ಮತ್ತು ಕುಕನೂರು ತಾಲ್ಲೂಕುಗಳಲ್ಲಿ ಒಂದು ಬಹುಗ್ರಾಮ ಕುಡಿಯುವ ನೀರಿನ ಯೋಜನೆಯಿಂದ ಮತ್ತು ಗಂಗಾವತಿ, ಕನಕಗಿರಿ, ಕಾರಟಗಿ ಮತ್ತು ಕೊಪ್ಪಳ ತಾಲ್ಲೂಕುಗಳಿಗೆ ಇತರೆ ಬಹುಗ್ರಾಮ ಯೋಜನೆಗಳ ಮೂಲಕ ಮತ್ತು ಶುದ್ಧ ಕುಡಿಯುವ ನೀರಿನ ಘಟಕಗಳಿಂದ ಅನುಷ್ಠಾನಗೊಳಿಸುವುದರ ಮೂಲಕ ಮತ್ತು ಶುದ್ಧ ಕುಡಿಯುವ ನೀರನ್ನು ಸರಬರಾಜು ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ. |
| (ಉ) | ಕೊಪ್ಪಳ ಜಿಲ್ಲೆಯಲ್ಲಿರುವ ಒಟ್ಟು ಕಾರ್ಖಾನೆಗಳೆಷ್ಟು; ಅವುಗಳು ಎಷ್ಟು ಎಕರೆ/ಹೆಕ್ಟರ್‌ನಲ್ಲಿ ಕಾರ್ಯ ನಿರ್ವಹಿಸುತ್ತಿವೆ? | ಕೊಪ್ಪಳ ಜಿಲ್ಲಾ ವ್ಯಾಪ್ತಿಯಲ್ಲಿ ಒಟ್ಟು 29 ಕಾರ್ಖಾನೆಗಳಿದ್ದು, ಅವುಗಳಲ್ಲಿ 12 ಬೃಹತ್ ಕೈಗಾರಿಕೆಗಳು 1892.83 ಎಕರೆಗಳಲ್ಲಿ ಮತ್ತು 17 ಮಧ್ಯಮ ಕೈಗಾರಿಕೆಗಳು 353.40 ಎಕರೆಗಳಲ್ಲಿ ಕೈಗಾರಿಕೆಗಳು ಕಾರ್ಯನಿರ್ವಹಿಸುತ್ತಿವೆ. |

ಸಂ:ಗ್ರಾಕುನೀ&ನೈಇ/59/ಆಡಳಿತ-8/2023

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ
ಸಚಿವರು